# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 33(04) |
| ಸದಸ್ಯರ ಹೆಸರು | ಶ್ರೀ ಐವನ್ ಡಿ ಸೋಜಾ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 17.08.2026 |
| ಉತ್ತರಿಸುವವರು | ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಮಾನವ ವನ್ಯಪ್ರಾಣಿ ಸಂಘರ್ಷ ತಡೆಗೆ ಸರ್ಕಾರ ಕೈಗೊಂಡಿರುವ ಶಾಶ್ವತ ಪರಿಹಾರವೇನು; (ವಿವರ ನೀಡುವುದು) | **ಇಲಾಖೆಯು ಮಾನವ- ವನ್ಯಜೀವಿ ಸಂಘರ್ಷವನ್ನು ಯಶಸ್ವಿಯಾಗಿ ನಿಭಾಯಿಸುತ್ತಿದ್ದು, ಈ ನಿಟ್ಟಿನಲ್ಲಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.**<br><br>**ಭೌತಿಕ ಅಡೆತಡೆಗಳ ನಿರ್ಮಾಣ:**<br>• ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಅರಣ್ಯದಂಚಿನಲ್ಲಿ 1528.956 ಕಿ.ಮೀ ಸೌರಶಕ್ತಿ ಬೇಲಿ, 2244.48 ಕಿ.ಮೀ ಆನೆತಡೆ ಕಂದಕ ನಿರ್ಮಾಣ ಮಾಡಲಾಗಿದ್ದು ಮತ್ತು ರೈಲ್ವೆ ಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ.<br>• ರಾಜ್ಯದಲ್ಲಿ ಮಾನವ-ಆನೆ ಸಂಘರ್ಷ ಹೆಚ್ಚಾಗಿರುವ ಪ್ರದೇಶಗಳಲ್ಲಿ ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ನಿಯಂತ್ರಿಸಲು ಉಪಯೋಗಿಸಿದ ರೈಲ್ವೆ ಹಳಿಗಳನ್ನು ಉಪಯೋಗಿಸಿಕೊಂಡು ರೈಲ್ವೆ ಬ್ಯಾರಿಕೇಡ್ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದ್ದು, **ಒಟ್ಟು.435.861 ಕಿ.ಮೀ** ರೈಲ್ವೆ ಬ್ಯಾರಿಕೇಡ್ ನಿರ್ಮಿಸಲಾಗಿದೆ.<br>**ಆನೆ ಕಾರ್ಯಪಡೆಗಳ ಸ್ಥಾಪನೆ:**<br>• ಸರ್ಕಾರವು ದಿನಾಂಕ:21.11.2022 ರ ಆದೇಶದಲ್ಲಿ ಹಾಸನ, ಚಿಕ್ಕಮಗಳೂರು, ಮೈಸೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ಹಾಗೂ ದಿನಾಂಕ:01.02.2023ರ ಆದೇಶದಲ್ಲಿ ಚಾಮರಾಜನಗರ ಜಿಲ್ಲೆ, ದಿನಾಂಕ:30.06.2023 ರ ಆದೇಶದಲ್ಲಿ ರಾಮನಗರ ಹಾಗೂ ಬೆಂಗಳೂರು ಜಿಲ್ಲೆಗಳಲ್ಲಿ ಮತ್ತು ದಿನಾಂಕ:18.05.2024 ರ ಆದೇಶದಲ್ಲಿ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಹಾಗೂ ದಿನಾಂಕ: 02-03-2026ರ ಆದೇಶದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮತ್ತು ದಿನಾಂಕ: 02-03-2026ರ ಆದೇಶದಲ್ಲಿ ಶೃಂಗೇರಿ-ಕೊಪ್ಪ, ಆನೆ ಕಾರ್ಯಪಡೆಯನ್ನು ಸ್ಥಾಪಿಸಿ ಕಾಡಾನೆ ಹಾವಳಿಯನ್ನು ತಡೆಗಟ್ಟಲು ಅಧಿಕಾರಿ / ಸಿಬ್ಬಂದಿಗಳನ್ನೊಳಗೊಂಡ **10 ಆನೆ ಕಾರ್ಯಪಡೆ (Elephant Task Force)** ನ್ನು ರಚಿಸಲಾಗಿರುತ್ತದೆ.<br>• ರಾಜ್ಯದಲ್ಲಿ ಮಾನವ- ಆನೆ ಸಂಘರ್ಷ ಉಂಟಾಗುವ ಸಂದರ್ಭಗಳಲ್ಲಿ ಕಾಡಾನೆಗಳನ್ನು ಸೆರೆಹಿಡಿಯುವ ಕಾರ್ಯಾಚರಣೆಗಾಗಿ ದುಬಾರೆ, ಮತ್ತಿಗೋಡು, ಬಳ್ಳೆ, ಹಾರಂಗಿ, ಭೀಮನಕಟ್ಟೆ ಮತ್ತು ರಾಮಾಪುರ ಆನೆ ಶಿಬಿರಗಳಲ್ಲಿನ ಪಳಗಿದ ಆನೆಗಳನ್ನು ಬಳಸಿಕೊಂಡು |

| | | |
|---|---|---|
| | | ನುರಿತ ಪಶು ವೈದ್ಯಾಧಿಕಾರಿ, ಮಾವುತ ಹಾಗೂ ಇತರೆ ಸಿಬ್ಬಂದಿಗಳೊಳಗೊಂಡ ಮೂರು ತಂಡಗಳನ್ನು ರಚಿಸಲಾಗಿರುತ್ತದೆ. ಸದರಿ ತಂಡವು ರಾಜ್ಯದ ಯಾವುದೇ ಭಾಗದಿಂದ ಕಾಡಾನೆ ಸೆರೆಹಿಡಿಯುವ ಕಾರ್ಯಾಚರಣೆಗೆ ಬೇಡಿಕೆ ಬಂದಾಗ ಈ ತಂಡಗಳಲ್ಲಿ ಒಂದು ತಂಡವನ್ನು ಕಾರ್ಯಾಚರಣೆಗೆ ನಿಯೋಜಿಸಲಾಗುತ್ತಿದೆ.<br>**ಚಿರತೆ ಕಾರ್ಯಪಡೆಗಳ ಸ್ಥಾಪನೆ:**<br>• ಸರ್ಕಾರವು ದಿನಾಂಕ: 31.01.2023ರ ಆದೇಶದಲ್ಲಿ ಮೈಸೂರು ವೃತ್ತದ ಮೈಸೂರು / ನಂಜನಗೂಡು / ಹೆಚ್.ಡಿ.ಕೋಟೆ / ಸರಗೂರು / ಟಿ.ನರಸೀಪುರ / ಮಂಡ್ಯ / ಪಾಂಡವಪುರ / ನಾಗಮಂಗಲ ವ್ಯಾಪ್ತಿಯಲ್ಲಿ ಚಿರತೆ ಹಾವಳಿ ಹೆಚ್ಚಾಗಿರುವ ಪ್ರದೇಶಗಳಲ್ಲಿ ಚಿರತೆ ಹಾವಳಿ ನಿಭಾಯಿಸುವ ನಿಟ್ಟಿನಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ, ವನ್ಯಜೀವಿ ವಿಭಾಗ, ಮೈಸೂರು ಇವರ ನೇತೃತ್ವದಲ್ಲಿ **ಚಿರತೆ ಕಾರ್ಯಪಡೆ (Leopard Task Force) ರಚಿಸಲಾಗಿದೆ**. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು) ಬೆಂಗಳೂರು ರವರ ಅಧಿಕೃತ ಜ್ಞಾಪನಾ ಪತ್ರ ದಿನಾಂಕ: 24.11.2023ರಲ್ಲಿ ಬೆಂಗಳೂರು ಜಿಲ್ಲೆಯ ಕಗ್ಗಲೀಪುರ / ಆನೇಕಲ್ಲು / ಯಲಹಂಕ / ಹೊಸಕೋಟೆ / ಕೆ.ಆರ್.ಪುರಂ ವಲಯಗಳ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಚಿರತೆ ಹಾವಳಿ ನಿಭಾಯಿಸುವ ನಿಟ್ಟಿನಲ್ಲಿ ಚಿರತೆ ಕಾರ್ಯಪಡೆಯನ್ನು ರಚಿಸಲಾಗಿದೆ.<br>**ಜಲ ಸಂಪನ್ಮೂಲ ಅಭಿವೃದ್ಧಿ:**<br>• ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳ ನಿರ್ಮಾಣ ಹಾಗೂ ಪುನಶ್ಚೇತನ ಗೊಳಿಸಿ ವನ್ಯಪ್ರಾಣಿಗಳ ಆವಾಸ ಸ್ಥಾನವನ್ನು ಅಭಿವೃದ್ಧಿ ಗೊಳಿಸಲಾಗುತ್ತಿದೆ. ಇದರಿಂದ ಕಾಡಾನೆ ಹಾಗೂ ಇತರೆ ವನ್ಯಪ್ರಾಣಿಗಳು ಕಾಡಿನಿಂದ ಹೊರಗೆ ಬಾರದಂತೆ ತಡೆಯಲಾಗುತ್ತಿದೆ.<br>**ಆವಾಸ ಸ್ಥಾನ ಅಭಿವೃದ್ಧಿ:**<br>• ಅರಣ್ಯ ಪ್ರದೇಶಗಳಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು ಹೆಚ್ಚಿನ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳಿಂದಾಗಿ ಹುಲ್ಲಿನ ಬೆಳವಣಿಗೆಗೆ ತೀವ್ರ ಅಡಚಣೆಯಾಗಿ ಅರಣ್ಯದಲ್ಲಿ ಹುಲ್ಲಿನ ಲಭ್ಯತೆ ಗಣನೀಯವಾಗಿ ಕಡಿಮೆಯಾಗಿರುವುದರಿಂದ ಹುಲ್ಲು ಬೆಳೆಯುವ ಪ್ರದೇಶಗಳಲ್ಲಿ ಬೆಳೆದಿರುವ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅನುವು ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.<br>• ಆನೆಗಳು ಮತ್ತು ಇತರೆ ವನ್ಯಪ್ರಾಣಿಗಳು ಒಂದು ಅರಣ್ಯ ಪ್ರದೇಶದಿಂದ ಇನ್ನೊಂದು ಅರಣ್ಯ ಪ್ರದೇಶಕ್ಕೆ ಅಡೆತಡೆ ಇರದಂತೆ ಸಂಚರಿಸಲು ಅನುಕೂಲವಾಗುವಂತೆ ವನ್ಯಜೀವಿ ಕಾರಿಡಾರ್ (Wildlife Corridor) ಅನುಷ್ಠಾನಗೊಳಿಸಬೇಕಾಗಿರುತ್ತದೆ, ಇದಕ್ಕಾಗಿ ತಯಾರಿಸಿರುವ ವನ್ಯಜೀವಿ ಕಾರಿಡಾರ್ (Wildlife Corridor) ಪಾಲಿಸಿ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. |

**ತ್ವರಿತ ಕಾರ್ಯಾಚರಣೆ:**

- ಆನೆ ಕಾರ್ಯಪಡೆ (ETF) ಮತ್ತು ಚಿರತೆ ಕಾರ್ಯಪಡೆ (LTF) ಗಳಿಗೆ 24X7 ಕಾರ್ಯ ನಿರ್ವಹಿಸಲು ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಿದ್ದು, ನಿಯಂತ್ರಣ ಕೊಠಡಿಗೆ ಬರುವ ಕರೆಗಳಿಗೆ ಸ್ಪಂದಿಸಿ ಕೂಡಲೇ ಕ್ರಮವಹಿಸಲಾಗುತ್ತಿದೆ.
- ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಪುಂಡಾನೆಗಳನ್ನು ಗುರುತಿಸಿ, ಸೆರೆಹಿಡಿದು ಆಗ್ಗಿಂದಾಗ್ಗೆ ಆನೆ ಶಿಬಿರಗಳಿಗೆ ಸ್ಥಳಾಂತರಿಸಲಾಗಿದೆ.
- ಚಿರತೆ / ಹುಲಿ ಹಾವಳಿ ಹೆಚ್ಚಾಗಿರುವ ಸೂಕ್ಷ್ಮ ಪ್ರದೇಶಗಳಲ್ಲಿ ಬೋನುಗಳನ್ನು ಇರಿಸಿ ಸೆರೆ ಹಿಡಿದು, ಸೂಕ್ತ ಆವಾಸಸ್ಥಾನಕ್ಕೆ ಸ್ಥಳಾಂತರಿಸಲು ಕ್ರಮವಹಿಸಲಾಗುತ್ತಿದೆ.
- ವನ್ಯಪ್ರಾಣಿಗಳ ಹಾವಳಿ ಹೆಚ್ಚಾಗಿರುವ ಪ್ರದೇಶಗಳಲ್ಲಿ ಈಗಾಗಲೇ ರಚಿಸಿರುವ RRT, ADC, ಮತ್ತು ETF ಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ತಂಡಗಳನ್ನು ಒಟ್ಟುಗೂಡಿಸಿ ಮಾನವ-ವನ್ಯಜೀವಿ ಸಂಘರ್ಷ ಉಪ ತಂಡಗಳಾಗಿ ರಚಿಸಿ ಆಯ್ದ ಸ್ಥಳಗಳಲ್ಲಿ ನಿಯೋಜಿಸಲಾಗಿದೆ.
- ನಿಸ್ತಂತು ಜಾಲದ ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ.
- ಕಾಡಾನೆಗಳ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ.
- ಕಾಡಾನೆ ಗುಂಪಿನಲ್ಲಿದ್ದ ವಯಸ್ಕ ಹೆಣ್ಣಾನೆಯನ್ನು ಗುರುತಿಸಿ ಅದಕ್ಕೆ ರೇಡಿಯೋ ಕಾಲರ್ ಅಳವಡಿಸಿ ಆನೆಗಳ ಚಲನ-ವಲನಗಳ ಬಗ್ಗೆ ಎಸ್.ಎಂ.ಎಸ್. ಹಾಗೂ ವಾಟ್ಸಾಪ್ ಮೂಲಕ ಜನರಿಗೆ ಮಾಹಿತಿಯನ್ನು ನೀಡಿ ಮಾನವ ಪ್ರಾಣಹಾನಿ ಹಾಗೂ ಮಾನವ ಗಾಯ ತಪ್ಪಿಸಲು ಕ್ರಮ ವಹಿಸಲಾಗುತ್ತಿದೆ.
- ಸಿಬ್ಬಂದಿಗಳು ಅರಣ್ಯದೊಳಗೆ ಹಾಗೂ ಅರಣ್ಯದಂಚಿನಲ್ಲಿ ನಿರಂತರ ಗಸ್ತು ಕಾರ್ಯ ಕೈಗೊಂಡು ಅಕ್ರಮ ಚಟುವಟಿಕೆಗಳನ್ನು ತಡೆಯುವುದರ ಜೊತೆಗೆ ವನ್ಯಜೀವಿಗಳ ಚಲನವಲನವನ್ನು ಮೇಲ್ವಿಚಾರಣೆ ಮಾಡಲಾಗುತ್ತಿದೆ.

**ಅರಿವು ಮೂಡಿಸಲು:**

- ಕಾಡಾನೆಗಳ ಹಾವಳಿ ಹೆಚ್ಚಾಗಿರುವ ಪ್ರದೇಶದಲ್ಲಿ ಜನ ಸಂಪರ್ಕ ಸಭೆಯನ್ನು ಕರೆದು ಜನರಲ್ಲಿ ಅರಿವು ಮೂಡಿಸಲಾಗುತ್ತಿದೆ.
- ಶಾಲಾಮಕ್ಕಳಿಗೆ ಅರಿವು ಮೂಡಿಸಲು **"ಚಿಣ್ಣರ ವನದರ್ಶನ"** ಕಾರ್ಯಕ್ರಮ ಕೈಗೊಳ್ಳಲಾಗುತ್ತಿದೆ.

**ಸಹಾಯ ಧನ:**

- ರೈತರಿಗೆ ಸಬ್ಸಿಡಿ ದರದಲ್ಲಿ ಸೋಲಾರ್ ಬೇಲಿ ನಿರ್ಮಾಣ ಮಾಡಲು ಉತ್ತೇಜನ ನೀಡಲಾಗುತ್ತಿದೆ ಹಾಗೂ ಅರಣ್ಯದ ಅಂಚಿನಲ್ಲಿ ಬರುವ ಖಾಸಗಿ ಜಮೀನುಗಳ ಸುತ್ತಾ ಸರಕಾರದ ವತಿಯಿಂದ ದೊರಕುವ ಶೇ. 50 ಸಬ್ಸಿಡಿಯನ್ನು ಬಳಸಿಕೊಂಡು ಸೌರಶಕ್ತಿ ಬೇಲಿಯನ್ನು ನಿರ್ಮಿಸಲಾಗುತ್ತಿದೆ.

**ತಂತ್ರಜ್ಞಾನ ಬಳಕೆ:**

- ಮಾನವ- ಆನೆ ಸಂಘರ್ಷ ಹೆಚ್ಚಿರುವ 10 ಜಿಲ್ಲೆಗಳಲ್ಲಿ **"ಆನೆ ಎಲ್ಲಿ"** ಎಂಬ ತಂತ್ರಜ್ಞಾನ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ. ಈ ವ್ಯವಸ್ಥೆಯು ಸಾರ್ವಜನಿಕ ದೂರುಗಳು, ಗಸ್ತು ತಿರುಗುವಿಕೆ ಮುಂತಾದ ವಿವಿಧ ಮಾಹಿತಿಗಳ ಮೂಲಕ ಒಂದು ಪ್ರದೇಶದಲ್ಲಿ ಆನೆಗಳ ಚಲನವಲನವನ್ನು ಮೇಲ್ವಿಚಾರಣೆ ಮಾಡುತ್ತದೆ. ಈ

ಮಾಹಿತಿಯು ಆನೆಗಳ ಚಲನವಲನದ ಮಾದರಿಯನ್ನು ಪತ್ತೆಹಚ್ಚಲು ಮತ್ತು ಸಾರ್ವಜನಿಕರಿಗೆ ಮುಂಚಿನ ಎಚ್ಚರಿಕೆ ಸಂದೇಶಗಳನ್ನು ಕಳುಹಿಸಲು ಸಹಾಯ ಮಾಡುತ್ತಿದೆ. ಮುಂದುವರೆದು, ವಿವಿಧ ವಿಭಾಗಗಳಿಂದ ಲಭ್ಯವಾಗುವ ಮಾಹಿತಿಯನ್ನು ರಿಯಲ್-ಟೈಮ್‌ನಲ್ಲಿ ಸಂಗ್ರಹಿಸಿ, ವಿಶ್ಲೇಷಿಸಿ, ಸೂಕ್ತ ನಿರ್ಧಾರಗಳನ್ನು ಕೈಗೊಳ್ಳಲು ಹಾಗೂ ಕ್ಷೇತ್ರ ಮಟ್ಟದ ಚಟುವಟಿಕೆಗಳನ್ನು ಸಮನ್ವಯಗೊಳಿಸಲು, ಕೇಂದ್ರ ಸ್ಥಾನದಲ್ಲಿ **ಸಂಯೋಜಿತ ಕಮಾಂಡ್ ಅಂಡ್ ಕಂಟ್ರೋಲ್ ಸೆಂಟರ್(ICCC)** ಹಾಗೂ 12 ವಿಭಾಗಗಳಲ್ಲಿ **ವಿಭಾಗೀಯ ಕಮಾಂಡ್ ಅಂಡ್ ಕಂಟ್ರೋಲ್ ಸೆಂಟರ್(DCCC)** ಸ್ಥಾಪಿಸಲಾಗುತ್ತಿದೆ.

- ರೇಡಿಯೋ ಕಾಲರ್ ಅಳವಡಿಸಿರುವ ಕಾಡಾನೆ, ಹುಲಿ, ಚಿರತೆಗಳ ಚಲನ-ವಲನಗಳನ್ನು ದಿನನಿತ್ಯ ಗಮನಿಸಲು ಇಲಾಖಾವತಿಯಿಂದ **"ಹೆಜ್ಜೆ"** ಎಂಬ ಡ್ಯಾಶ್ ಬೋರ್ಡ್ ನ್ನು ತಯಾರಿಸಲಾಗಿದೆ.
- ಕಾಡಂಚಿನ ಗ್ರಾಮಗಳಲ್ಲಿ ವನ್ಯಪ್ರಾಣಿಗಳು ಬಂದಂತಹ ಸಂದರ್ಭಗಳಲ್ಲಿ ಸಾರ್ವಜನಿಕರಿಗೆ ಎಚ್ಚರಿಕೆ/ ಮಾಹಿತಿ ನೀಡಲು **Advance alert system** ಅನ್ನು ತಯಾರಿಸಲಾಗಿದೆ. ಇದರಿಂದಾಗಿ ಸಾರ್ವಜನಿಕರಿಗೆ ನೇರವಾಗಿ ಸಂದೇಶಗಳನ್ನು ಕಳುಹಿಸಲಾಗುತ್ತಿದೆ.
- ಕಾಡಾನೆ ಇರುವ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಎಚ್ಚರಿಕೆ/ ಮಾಹಿತಿ ನೀಡಲು ಡಿಜಿಟಲ್ ಬೋರ್ಡ್‌ಗಳನ್ನು ಅಳವಡಿಸಲಾಗಿದೆ.
- ಸರ್ವೈಲೆನ್ಸ್ ಕ್ಯಾಮೆರಾಗಳ ಅಳವಡಿಕೆ: ಮಾನವ ವನ್ಯಜೀವಿ ಸಂಘರ್ಷ ಹೆಚ್ಚಾಗಿ ಕಂಡುಬರುವ ವನ್ಯಜೀವಿ ವಲಯಗಳ ಗಡಿರೇಖೆಗಳಲ್ಲಿ ಎಲ್ಲೆಲ್ಲಿ ನೆಟ್ ವರ್ಕ್ ನ ಸಂಪರ್ಕವಿರುವುದು ಅಲ್ಲಿ Real time Surveillance GSM ಆಧಾರಿತ Camera with AI based Software ನ್ನು ಅಳವಡಿಸಿ, ಸದರಿ ಮಾಹಿತಿಯನ್ನಾಧರಿಸಿ ಮಾನವ ವನ್ಯಜೀವಿ ಸಂಘರ್ಷ ನಿಯಂತ್ರಣದ ನಿರ್ವಹಣೆಯನ್ನು ಮಾಡಲಾಗುತ್ತಿದೆ.
- ಅರಣ್ಯದಂಚಿನ ಆಯ್ದ ಪ್ರದೇಶಗಳಲ್ಲಿ **"AI"** Based Camera ಗಳನ್ನು ಅಳವಡಿಸಲಾಗಿದ್ದು, ವನ್ಯಪ್ರಾಣಿಗಳ ಚಲನ-ವಲನಗಳನ್ನು ಗಮನಿಸಲಾಗುತ್ತಿದೆ.
- **ಥರ್ಮಲ್ ಡ್ರೋನ್‌ಗಳ** ಮುಖಾಂತರ ವನ್ಯಪ್ರಾಣಿಗಳ ಚಲನ-ವಲನಗಳನ್ನು ಗಮನಿಸಲಾಗುತ್ತಿದೆ.
- **ಇ-ಪರಿಹಾರ** ತಂತ್ರಾಂಶದಲ್ಲಿ ಬೆಳೆನಾಶ, ಆಸ್ತಿನಷ್ಟ ಮತ್ತು ಜೀವಹಾನಿ ಮತ್ತು ಇತರೆ ಪ್ರಕರಣಗಳನ್ನು ದಾಖಲಿಸಿ, ಸದರಿ ಪ್ರಕರಣಗಳಿಗೆ ಸಂಬಂದಿಸಿದಂತೆ ಪರಿಹಾರಧನವನ್ನು ಒದಗಿಸುವ ಪ್ರಕ್ರಿಯೆಯನ್ನು ಸುಗಮಗೊಳಿಸಲಾಗಿರುತ್ತದೆ.

**ಪರಿಹಾರಧನ ವಿತರಣೆ:**

ಸರ್ಕಾರಿ ಆದೇಶ ಸಂಖ್ಯೆ: ಅಪಜೀ 114 ಎಫ್.ಡಬ್ಲ್ಯೂ.ಎಲ್ 2022, ಬೆಂಗಳೂರು ದಿನಾಂಕ: 15-12-2022 ಮತ್ತು ದಿನಾಂಕ: 29.04.2025 ರಲ್ಲಿ ಈ ಕೆಳಕಂಡಂತೆ ಪರಿಹಾರ ಧನವನ್ನು ಪಾವತಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.

1 ವನ್ಯಪ್ರಾಣಿ ದಾಳಿಯಿಂದ ಉಂಟಾದ ಮಾನವ ಪ್ರಾಣ ಹಾನಿ ಪ್ರಕರಣಕ್ಕೆ ರೂ.20.00 ಲಕ್ಷಗಳು

2 ಶಾಶ್ವತ ಅಂಗವಿಕಲತೆಗೆ ರೂ.10.00 ಲಕ್ಷಗಳು

| | | |
|---|---|---|
| | | 3 ಭಾಗಶಃ ಅಂಗವಿಕಲತೆಗೆ ರೂ.5.00 ಲಕ್ಷಗಳು<br>4 ವನ್ಯಪ್ರಾಣಿ ದಾಳಿಯಿಂದ ಗಾಯಗೊಂಡ ವ್ಯಕ್ತಿಗೆ ಗರಿಷ್ಟ ರೂ.60,000<br>5 ವನ್ಯಪ್ರಾಣಿ ದಾಳಿಯಿಂದ ಉಂಟಾದ ಮಾನವ ಪ್ರಾಣ ಹಾನಿ ಪ್ರಕರಣದಲ್ಲಿ ಮೃತಪಟ್ಟ ವ್ಯಕ್ತಿಯ ವಾರಸುದಾರರಿಗೆ ಹಾಗೂ ಶಾಶ್ವತ ಅಂಗವಿಕಲತೆ ಉಂಟಾದ ವ್ಯಕ್ತಿಗಳಿಗೆ ಮೇಲ್ಕಂಡ ಪರಿಹಾರ ಧನ ನೀಡುವುದರ ಜೊತೆಗೆ ಮಾಹೆಯಾನ ರೂ.4,000 ರಂತೆ 05 ವರ್ಷಗಳ ಅವಧಿಗೆ ಮಾಸಾಶನ ಪಾವತಿಸಲು ಅವಕಾಶ ಕಲ್ಪಿಸಲಾಗಿದೆ.<br><br>ವನ್ಯಪ್ರಾಣಿಗಳಿಂದ ಹಾನಿಗೊಳಗಾದ ವಿವಿಧ ಬೆಳೆಗಳಿಗೆ ಸರ್ಕಾರದ ಆದೇಶ ಸಂಖ್ಯೆ:ಅಪಜೀ 156 ಎಫ್.ಡಬ್ಲ್ಯೂ.ಎಲ್. 2022 ದಿನಾಂಕ:18.01.2023 ರನ್ವಯ ದರಗಳನ್ನು ದುಪ್ಪಟ್ಟು ಮಾಡಿ ರೈತರಿಗೆ ಪರಿಹಾರಧನ ಪಾವತಿಸಲಾಗುತ್ತಿದೆ. **(ಅನುಬಂಧ-1** ರಲ್ಲಿ ಒದಗಿಸಿದೆ.)<br>ಸರ್ಕಾರದ ಆದೇಶ ಸಂಖ್ಯೆ: ಅಪಜೀ 171 ಎಫ್.ಡಬ್ಲ್ಯೂ.ಎಲ್. 2022 ದಿನಾಂಕ: 16.02.2023 ರಲ್ಲಿ ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಸಾಕು ಪ್ರಾಣಿಗಳ ಪ್ರಾಣ ಹಾನಿ ಪ್ರಕರಣಗಳಿಗೆ ರಾಜ್ಯ ವಿಪತ್ತು ನಿರ್ವಹಣಾ ನಿಧಿ (SDRF) ರಲ್ಲಿನ ಚಾಲ್ತಿಯಲ್ಲಿರುವ ಪರಿಷ್ಕೃತ ದರಗಳಂತೆ ಪಾವತಿಸಲು ಆದೇಶಿಸಲಾಗಿದೆ**(ಅನುಬಂಧ-2** ರಲ್ಲಿ ಒದಗಿಸಿದೆ.)<br>ಸರ್ಕಾರದ ಆದೇಶ ಸಂಖ್ಯೆ: ಅಪಜೀ 128 ಎಫ್.ಡಬ್ಲ್ಯೂ.ಎಲ್ 2013 ಬೆಂಗಳೂರು, ದಿನಾಂಕ: 15.09.2015 ರನ್ವಯ ವನ್ಯಪ್ರಾಣಿಗಳ ದಾಳಿಯಿಂದ ಗಾಯಗೊಂಡ ಸಂತ್ರಸ್ಥರಿಗೆ ಕಾಡುಪ್ರಾಣಿಗಳ ದಾಳಿಯಿಂದ ಶಾಶ್ವತ ಅಂಗವಿಕಲತೆಗೆ ಒಳಗಾದ ಸಂತ್ರಸ್ಥರಿಗೆ ದಯಾತ್ಮಕಧನದ ಜೊತೆಗೆ ವೈದ್ಯಕೀಯ ವೆಚ್ಚವನ್ನು ಸರ್ಕಾರಿ ನೌಕರರಿಗೆ ಅನ್ವಯಿಸುವ ಸಿಜಿಹೆಚ್‌ಎಸ್ ದರಗಳಿಗೆ ಮಿತಿಗೊಳಿಸಿದ್ದು, ಅದರನ್ವಯ ಪಾವತಿಸಲಾಗುತ್ತಿದೆ **(ಅನುಬಂಧ-3** ರಲ್ಲಿ ಒದಗಿಸಿದೆ.) |
| ಆ) | ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಮಾನವ ವನ್ಯಪ್ರಾಣಿ ಸಂಘರ್ಷದಿಂದ ಪ್ರಾಣ ಕಳೆದುಕೊಂಡಿರುವವರ ಸಂಖ್ಯೆ ಎಷ್ಟು; | ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಮಾನವ ವನ್ಯಪ್ರಾಣಿ ಸಂಘರ್ಷದಿಂದ ಪ್ರಾಣ ಕಳೆದುಕೊಂಡಿರುವವರ ಸಂಖ್ಯೆಯ ವಿವರ ಈ ಕೆಳಕಂಡಂತಿದೆ. |
| ಇ) | ಕಾಡು ಪ್ರಾಣಿಗಳು ನಾಡಿಗೆ ಬರಲು ಕಾರಣವೇನು: ಈ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ: (ವಿವರ ನೀಡುವುದು); | **ರಾಜ್ಯದಲ್ಲಿ ಮಾನವ- ವನ್ಯಜೀವಿ ಸಂಘರ್ಷ ಹೆಚ್ಚಾಗಲು ಕಾರಣಗಳು ಈ ಕೆಳಕಂಡಂತಿರುತ್ತದೆ.**<br>1 ಆನೆ, ಹುಲಿ, ಚಿರತೆ, ಕರಡಿ, ಕಾಡು ಹಂದಿ ಮತ್ತು ಮಂಗಗಳು ಒಳಗೊಂಡಂತೆ ಕಾಡು ಪ್ರಾಣಿಗಳ ಸಂತತಿಯಲ್ಲಿ ಹೆಚ್ಚಳ<br><br>ಕಳೆದ ಮೂರು ಗಣತಿಯಂತೆ ಆನೆ, ಹುಲಿ ಮತ್ತು ಚಿರತೆಯ ಸಂಖ್ಯೆಯ ವಿವರ ಈ ಕೆಳಕಂಡಂತಿದೆ. |

| ಕ್ರ ಸಂ | ವರ್ಷ | ವನ್ಯಪ್ರಾಣಿಗಳ ದಾಳಿಯಿಂದ ಮೃತಪಟ್ಟವರ ಒಟ್ಟು ಸಂಖ್ಯೆ |
|---|---|---|
| 01 | 2023-24 | 65 |
| 02 | 2024-25 | 46 |
| 03 | 2025-26 | 53 |
| 04 | 2026-27 (ಇದುವರೆವಿಗೂ) | 16 |

| ಕ್ರ ಸಂ | ಹುಲಿ ಮತ್ತು ಚಿರತೆ ಗಣತಿ | ಹುಲಿಗಳ ಸಂಖ್ಯೆ | ಚಿರತೆಗಳ ಸಂಖ್ಯೆ |
|---|---|---|---|

| | ನಡೆಸಲಾದ ವರ್ಷ | | |
|---|---|---|---|
| 1. | 2014 | 406 | - |
| 2. | 2018 | 524 | 1783 |
| 3. | 2022 | 563 | 1879 |

| ಆನೆ ಗಣತಿ ನಡೆಸಲಾದ ವರ್ಷ | ಆನೆಗಳ ಸಂಖ್ಯೆ |
|---|---|
| 2012 | 6072 |
| 2017 | 6049 |
| 2023 | 6395 |

2 ಅಭಿವೃದ್ಧಿ ಚಟುವಟಿಕೆಗಳು, ಕೃಷಿಯ ಹರಡುವಿಕೆ ಮತ್ತು ಅರಣ್ಯ ಪ್ರದೇಶದ ಒತ್ತುವರಿ ಹಾಗೂ ಅರಣ್ಯ ಆವಾಸಸ್ಥಾನಗಳ ವಿಘಟನೆ.

3 ಅರಣ್ಯ ಪ್ರದೇಶಗಳಲ್ಲಿ ಯುಪಟೋರಿಯಂ, ಸೆನ್ನಾ ಸ್ಪೆಕ್ಟ್ಯಾಬಿಲಿಸ್ ಹಾಗೂ ಲಂಟಾನಾದಂತಹ ಆಕ್ರಮಣಕಾರಿ ಕಳೆಗಳು ವೇಗವಾಗಿ ಹರಡುವುತ್ತಿರುವುದು.

4 ಅರಣ್ಯ ಪ್ರದೇಶಗಳ ಅಂಚಿನಲ್ಲಿರುವ ಖಾಸಗಿ ಜಮೀನುಗಳಲ್ಲಿ ಕಾಡಾನೆ ಒಳಗೊಂಡಂತೆ ಇತರೆ ವನ್ಯಪ್ರಾಣಿಗಳನ್ನು ಆಕರ್ಷಿಸುವ ಬೆಳೆಗಳಾದ ಭತ್ತ, ತೆಂಗು, ಬಾಳೆ, ಹಲಸು ಇತ್ಯಾದಿ ಬೆಳೆಗಳನ್ನು ಬೆಳೆಯುವುದರಿಂದ ವನ್ಯಪ್ರಾಣಿ ದಾಳಿ ಹೆಚ್ಚಳವಾಗುತ್ತಿದೆ.

5 ಕಾಡಾನೆಗಳು ಹಿಂದಿನಿಂದಲೂ ಸಂಚರಿಸುತ್ತಿದ್ದ ದಾರಿಗಳಿಗೆ (ಕಾರಿಡಾರ್) ಅಡಚಣೆ ಉಂಟಾಗಿರುತ್ತದೆ.

| | | |
|---|---|---|
| ಈ) | ಅರಣ್ಯ ಪ್ರದೇಶಗಳಲ್ಲಿ ಅಕ್ರಮವಾಗಿ ರೆಸಾರ್ಟ್ ಗಳಿಂದ ಮತ್ತು ಅಲ್ಲಿ ನಡೆಯುತ್ತಿರುವ ಅಕ್ರಮ ಚಟುವಟಿಕೆಗಳಿಂದ ಕಾಡು ಪ್ರಾಣಿಗಳು ನಾಡಿಗೆ ಬರುತ್ತಿವೆ ಎಂದು ಸಾರ್ವಜನಿಕರು ಆರೋಪಿಸುತ್ತಿದ್ದು, ಇದಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು; | ಸಂರಕ್ಷಿತ ಪ್ರದೇಶಗಳಲ್ಲಿ ಯಾವುದೇ ಅಕ್ರಮ ರೆಸಾರ್ಟ್ಸ್ ಗಳು ಇರುವುದಿಲ್ಲ. |

**ಇ-ಸಂಖ್ಯೆ: ಅಪಜೀ 242 ಎಫ್‌ಡಬ್ಲ್ಯೂಎಲ್ 2026**

**(ರಾಮಲಿಂಗಾರೆಡ್ಡಿ)**
ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

ಅನುಬಂಧ-1

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗುವ ಬೆಳೆನಾಶ ಪ್ರಕರಣಗಳಿಗೆ ನೀಡಲಾಗುತ್ತಿರುವ ದಯಾತ್ಮಕ ಧನವನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:-**
(1) ಸರ್ಕಾರದ ಆದೇಶ ಸಂಖ್ಯೆ:ಅಪಜೀ 143 ಎಫ್‌ಡಬ್ಲ್ಯೂಎಲ್ 2010, ದಿನಾಂಕ: 30/04/2011.
(2) ಸರ್ಕಾರದ ಆದೇಶ ಸಂಖ್ಯೆ:ಅಪಜೀ 109 ಎಫ್‌ಎಪಿ 2014, ದಿನಾಂಕ:13/08/2014.
(3) ಸರ್ಕಾರದ ಆದೇಶ ಸಂಖ್ಯೆ:ಅಪಜೀ 130 ಎಫ್‌ಡಬ್ಲ್ಯೂಎಲ್ 2016, ದಿನಾಂಕ:19/09/2016.
(4) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಬೆಂಗಳೂರು ಇವರ ಪತ್ರ ಸಂಖ್ಯೆ:ಪ್ರಮುಅಸಂ(ವಜೀ)/ಸಿ2/ಸಿಆರ್-37/2011-12, ದಿನಾಂಕ:12/10/2022

*****

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಸರ್ಕಾರದ ಆದೇಶದಲ್ಲಿ ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗುವ ಬೆಳೆನಾಶ, ಮಾನವ ಪ್ರಾಣಹಾನಿ, ಸಾಕು ಪ್ರಾಣಿಗಳ ಪ್ರಾಣಹಾನಿ, ಶಾಶ್ವತ ಅಂಗವಿಕಲತೆ, ಗಾಯಗೊಂಡವರಿಗೆ ಹಾಗೂ ಆಸ್ತಿಪಾಸ್ತಿ ನಷ್ಟಕ್ಕೆ ಸಂಬಂಧಿಸಿದಂತೆ ಪರಿಹಾರ ಮೊತ್ತವನ್ನು ನಿಗಧಿಪಡಿಸಿ ವಿತರಿಸಲು ಅರಣ್ಯ ಇಲಾಖೆಯ ಕ್ಷೇತ್ರಾಧಿಕಾರಿಗಳಿಗೆ ಆರ್ಥಿಕ ಅಧಿಕಾರಗಳನ್ನು ಪ್ರತ್ಯಾಯೋಜಿಸಿ ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರ ಸರ್ಕಾರದ ಆದೇಶದಲ್ಲಿ 2014-15ನೇ ಸಾಲಿನಿಂದ ಜಾರಿಗೆ ಬರುವಂತೆ ಮಾನವ-ವನ್ಯಜೀವಿ ಸಂಘರ್ಷದಿಂದಾಗಿ ಹಸು, ಎತ್ತು, ಎಮ್ಮೆ, ಕೋಣಗಳು ಮೃತಪಟ್ಟಲ್ಲಿ ಅವುಗಳ ಮಾಲೀಕರಿಗೆ ನೀಡಲಾಗುತ್ತಿರುವ ಪರಿಹಾರ ಧನವನ್ನು ರೂ.10,000/- ಕ್ಕೆ ಹೆಚ್ಚಿಸಲು ಹಾಗೂ ಮೇಕೆ, ಕುರಿಗಳು ಮೃತಪಟ್ಟಲ್ಲಿ ಅವುಗಳ ಮಾಲೀಕರಿಗೆ ನೀಡಲಾಗುತ್ತಿರುವ ಪರಿಹಾರ ಧನವನ್ನು ರೂ.5,000/- ಗಳಿಗೆ ಹೆಚ್ಚಿಸಲು ಹಾಗೂ **ಬೆಳೆಹಾನಿ ಉಂಟಾದಲ್ಲಿ ಸಂತ್ರಸ್ತ ರೈತರಿಗೆ ನೀಡಲಾಗುತ್ತಿರುವ ಪರಿಹಾರ ಧನದ ಗರಿಷ್ಠ ಮಿತಿಯನ್ನು ರೂ.50,000/- ರಿಂದ ರೂ.1,00,000/- ಗಳಿಗೆ ಹೆಚ್ಚಿಸಲಾಗಿದೆ.**

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರ ಸರ್ಕಾರದ ಆದೇಶದಲ್ಲಿ ವನ್ಯಪ್ರಾಣಿಗಳಿಂದ ಉಂಟಾದ ಬೆಳೆನಾಶಕ್ಕೆ ದಯಾತ್ಮಕ ದರ, ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಶಾಶ್ವತ ಅಂಗವಿಕಲತೆ ಮತ್ತು ಭಾಗಶಃ ಶಾಶ್ವತ ಅಂಗವಿಕಲತೆ ಹೊಂದುವ ವ್ಯಕ್ತಿಗಳಿಗೆ ಪರಿಹಾರಧನ, ಕಾಡು ಪ್ರಾಣಿಗಳಿಂದ ಗಾಯಗೊಂಡ ಪ್ರತಿ ವ್ಯಕ್ತಿಗೆ ಗರಿಷ್ಠ ಪರಿಹಾರ ಧನ ಹಾಗೂ ಕಾಡಾನೆ ದಾಳಿಯಿಂದ ಉಂಟಾದ ಆಸ್ತಿ ನಷ್ಟ ಪ್ರತಿ ಪ್ರಕರಣಕ್ಕೆ ಆದೇಶದಲ್ಲಿ ನಿಗಧಿಪಡಿಸಲಾಗಿರುವ ದಯಾತ್ಮಕ ದರ ಮತ್ತು ಪರಿಹಾರವನ್ನು ಅನುಬಂಧದಲ್ಲಿರುವಂತೆ ಹೆಚ್ಚಿಸಿ ನಿಗಧಿಪಡಿಸಲಾಗಿದೆ.

...2

Manjuleg 18/1/23

ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಇವರು ಸನ್ಮಾನ್ಯ ಮುಖ್ಯಮಂತ್ರಿಗಳು 2022-23ನೇ ಸಾಲಿನ ಸೆಪ್ಟೆಂಬರ್ ಮಾಹೆಯಲ್ಲಿ ನಡೆದ ಅಧಿವೇಶನದಲ್ಲಿ ದಿನಾಂಕ:21/09/2022 ರಂದು ವನ್ಯಪ್ರಾಣಿ ದಾಳಿಯಿಂದ ಉಂಟಾದ ಮಾನವ ಪ್ರಾಣಹಾನಿ ಹಾಗೂ ಬೆಳೆ ಹಾನಿ ಪ್ರಕರಣಗಳಲ್ಲಿ ಪ್ರಸ್ತುತ ಪಾವತಿಸಲಾಗುತ್ತಿರುವ ಪರಿಹಾರ ಧನವನ್ನು ದುಪ್ಪಟ್ಟು ಮಾಡುವುದಾಗಿ ಘೋಷಿಸಿರುವುದರಿಂದ ವನ್ಯಪ್ರಾಣಿ ದಾಳಿಯಿಂದ ಉಂಟಾದ ಬೆಳೆನಾಶಕ್ಕೆ ಪ್ರಸ್ತುತ ಪಾವತಿಸುತ್ತಿರುವ ಪರಿಹಾರ ಧನವನ್ನು ಪರಿಷ್ಕರಿಸಿ ದ್ವಿಗುಣಗೊಳಿಸಲು ಹಾಗೂ ಸದರಿ ಪರಿಹಾರ ಮೊತ್ತವನ್ನು ವಿತರಿಸಲು ಅರಣ್ಯ ಇಲಾಖೆಯ ಕ್ಷೇತ್ರಾಧಿಕಾರಿಗಳಿಗೆ ಆರ್ಥಿಕ ಅಧಿಕಾರಗಳನ್ನು ಪ್ರತ್ಯಾಯೋಜಿಸಿ ಮಂಜೂರಾತಿ ನೀಡುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಇ- ಸಂಖ್ಯೆ: ಅಪಜೀ 156 ಎಫ್‌ಡಬ್ಲ್ಯೂಎಲ್ 2022,</u>**
**<u>ಬೆಂಗಳೂರು, ದಿನಾಂಕ:18-01-2023.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗುವ ಬೆಳೆನಾಶ ಪ್ರಕರಣಗಳಿಗೆ ಪ್ರಸ್ತುತ ಚಾಲ್ತಿಯಲ್ಲಿರುವ ಸರ್ಕಾರದ ಆದೇಶ ಸಂಖ್ಯೆ:ಅಪಜೀ 130 ಎಫ್‌ಡಬ್ಲ್ಯೂಎಲ್ 2016, ದಿನಾಂಕ:19-09-2016ರನ್ವಯ ಪಾವತಿಸುತ್ತಿರುವ ಪರಿಹಾರ ಮೊತ್ತವನ್ನು ದ್ವಿಗುಣಗೊಳಿಸಿ ಹಾಗೂ ಮಾವು, ಸಪೋಟ, ಸೀಬೆ, ಹಲಸು, ದಾಳಿಂಬೆ ಸೀತಾಫಲ ಮತ್ತು ಹಿಪ್ಪುನೇರಳೆ ಬೆಳೆಗಳನ್ನು ಹೊಸದಾಗಿ ಸೇರ್ಪಡೆಗೊಳಿಸಿ ಪರಿಹಾರ ಮೊತ್ತವನ್ನು ಈ ಆದೇಶದಲ್ಲಿನ **ಅನುಬಂಧ-1** ರಲ್ಲಿರುವಂತೆ ನಿಗಧಿಪಡಿಸಲಾಗಿದೆ.

ಈ ಪರಿಹಾರ ಮೊತ್ತವನ್ನು ಪಾವತಿಸಲು ಅರಣ್ಯ ಇಲಾಖೆಯ ಕ್ಷೇತ್ರಾಧಿಕಾರಿಗಳಿಗೆ ಆರ್ಥಿಕ ಅಧಿಕಾರವನ್ನು **ಅನುಬಂಧ-2** ರಲ್ಲಿರುವಂತೆ ಪ್ರತ್ಯಾಯೋಜಿಸಿ ಮಂಜೂರಾತಿ ನೀಡಲಾಗಿದೆ.

ಈ ಆದೇಶವು ತಕ್ಷಣದಿಂದ ಹಾಗೂ ಮುಂದಿನ ಆದೇಶದವರೆಗೆ ಜಾರಿಗೆ ಬರತಕ್ಕದ್ದು.

ಈ ಪರಿಹಾರ ಮೊತ್ತದ ಪಾವತಿಗೆ ಸಂಬಂಧಿಸಿದಂತೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಹೊರಡಿಸಲಾಗಿದೆ:-

(1) ಮೇಲಿನ ಪ್ರಕರಣಗಳಲ್ಲಿ ಒತ್ತುವರಿಗೊಂಡ ಅರಣ್ಯ ಭೂಮಿಯಲ್ಲಿ ಬೆಳೆಯಲಾದ ಬೆಳೆಗಳು ಕಾಡು ಪ್ರಾಣಿಗಳಿಂದ ಹಾನಿಗೊಂಡಲ್ಲಿ ಅಂಥ ಬೆಳೆ ನಷ್ಟಕ್ಕೆ ಪರಿಹಾರ ಧನ ನೀಡಲಾಗುವುದಿಲ್ಲ.

(2) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಇವರು ಎಲ್ಲಾ ಪ್ರಕರಣಗಳಲ್ಲಿ ಪರಿಹಾರ ಧನದ ವಿತರಣೆಯ ಆಡಳಿತವನ್ನು ನಿಭಾಯಿಸುವುದು.

(3) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು, ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು, ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು, ಅರಣ್ಯ ಸಂರಕ್ಷಣಾಧಿಕಾರಿಗಳು, ಪರಿಹಾರ ಮೊತ್ತವು ಗರಿಷ್ಠವಾಗಿರುವ ಪ್ರಕರಣಗಳಲ್ಲಿ ಪರಿಹಾರ ಧನ ವಿತರಿಸುವ ಸಂದರ್ಭದಲ್ಲಿ ಸಂಬಂಧಿಸಿದ ಕ್ಷೇತ್ರ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಂದ / ಅರಣ್ಯ ಸಂರಕ್ಷಣಾಧಿಕಾರಿಗಳಿಂದ ಸ್ಥಳ ತಪಾಸಣೆ ಮಾಡಿಸುವುದು.

...3

Kaugalay 18/1/23

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 696 ವೆಚ್ಚ-5/2022, ದಿನಾಂಕ:12/01/2023ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Manjula 18/1/23
(ಜಿ. ಮಂಜುಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ
18/1/23 (ಅರಣ್ಯ-ಎ)

**ಇವರಿಗೆ,**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಈ ಆದೇಶವನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ ಈ ಆದೇಶದ 250 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ, #432, 4ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು, ಇಲ್ಲಿಗೆ ಹಾಗೂ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು-560003 ಇಲ್ಲಿಗೆ 500 ಪ್ರತಿಗಳನ್ನು ಒದಗಿಸುವಂತೆ ಕೋರಿದೆ.

**ಪ್ರತಿಗಳು:**

1. ಪ್ರಧಾನ ಮಹಾಲೇಖಪಾಲರು, (ಲೆಕ್ಕಪತ್ರ / ಲೆಕ್ಕಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು), ಅರಣ್ಯಭವನ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು 560003.
3. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯಭವನ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು 560003.
4. ಎಲ್ಲಾ ಅಪರ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು / ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು / ಅರಣ್ಯ ಸಂರಕ್ಷಣಾಧಿಕಾರಿಗಳು / ಉಪ ಅರಣ್ಯ ಸಂರಕ್ಷಣಾಧಿಕಾರಿಗಳು (ಪ್ರಾದೇಶಿಕ / ವನ್ಯಜೀವಿ) / ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು (ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಬೆಂಗಳೂರು ಇವರ ಮುಖಾಂತರ)
5. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆಯವರ ಆಪ್ತ ಕಾರ್ಯದರ್ಶಿಗಳು,
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆಯವರ ಆಪ್ತ ಕಾರ್ಯದರ್ಶಿಗಳು,
8. ಸರ್ಕಾರದ ಜಂಟಿ ಕಾರ್ಯದರ್ಶಿ, ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆಯವರ ಆಪ್ತ ಕಾರ್ಯದರ್ಶಿಗಳು,
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-5), ವಿಧಾನಸೌಧ, ಬೆಂಗಳೂರು.
10. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿಗಳು.

**ಸರ್ಕಾರದ ಆದೇಶ ಸಂಖ್ಯೆ:ಅಪಜೀ 156 ಎಫ್‌ಡಬ್ಲ್ಯೂಎಲ್ 2022, ದಿನಾಂಕ:18-01-2023 ಕ್ಕೆ**

**ಅನುಬಂಧ-1**

| ಕ್ರ. ಸಂ. | ಬೆಳೆ | ಸರ್ಕಾರದ ಆದೇಶ ಸಂಖ್ಯೆ:ಅಪಜೀ 130 ಎಫ್‌ಡಬ್ಲ್ಯೂಎಲ್ 2016, ದಿನಾಂಕ:19-09-2016ರಂತೆ ನಿಗಧಿಯಾಗಿರುವ ದರ / ಕ್ವಿಂಟಾಲ್‌ಗೆ (ರೂ.ಗಳಲ್ಲಿ) | ಪ್ರಸ್ತುತ ನಿಗಧಿಪಡಿಸಲಾಗಿರುವ ಪರಿಷ್ಕೃತ ದರ / ಕ್ವಿಂಟಾಲ್‌ಗೆ (ರೂ.ಗಳಲ್ಲಿ) |
|---|---|---|---|
| 1 | ಭತ್ತ | 1320 | 2640 |
| 2 | ಜೋಳ | 1240 | 2480 |
| 3 | ಮೆಕ್ಕೆಜೋಳ | 1240 | 2480 |
| 4 | ಸಜ್ಜೆ | 1200 | 2400 |
| 5 | ರಾಗಿ | 1200 | 2400 |
| 6 | ತೊಗರಿ | 3100 | 6200 |
| 7 | ಹೆಸರು | 3400 | 6800 |
| 8 | ಉದ್ದು | 3400 | 6800 |
| 9 | ಕಬ್ಬು | 162.36 | 324.72 |
| 10 | ಹತ್ತಿ | 3970 | 7940 |
| 11 | ಶೇಂಗಾ (ನೆಲಗಡಲೆ) | 3100 | 6200 |
| 12 | ಸೂರ್ಯಕಾಂತಿ | 3020 | 6040 |
| 13 | ಸೋಯಾ | 1960 | 3920 |
| 14 | ಎಳ್ಳು | 3160 | 6320 |
| 15 | ಹುಚ್ಚೆಳ್ಳು | 2480 | 4960 |
| 16 | ಕಂಬು | 1200 | 2400 |
| 17 | ಬಟಾಣಿ | 4600 | 9200 |
| 18 | ಹಲಸಂದೆ | 2400 | 4800 |
| 19 | ಅವರೆ | 2242 | 4484 |
| 20 | ಹಾಗಲಕಾಯಿ | 1800 | 3600 |
| 21 | ಬದನೆಕಾಯಿ | 800 | 1600 |
| 22 | ನುಗ್ಗೆಕಾಯಿ | 3200 | 6400 |
| 23 | ಗೆಡ್ಡೆಕೋಸು | 1000 | 2000 |
| 24 | ಬೆಂಡೆಕಾಯಿ | 1200 | 2400 |

| ಕ್ರ. ಸಂ. | ಬೆಳೆ | ಸರ್ಕಾರದ ಆದೇಶ ಸಂಖ್ಯೆ:ಅಪಜೀ 130 ಎಫ್‌ಡಬ್ಲ್ಯೂಎಲ್ 2016, ದಿನಾಂಕ:19-09-2016ರಂತೆ ನಿಗಧಿಯಾಗಿರುವ ದರ / ಕ್ವಿಂಟಾಲ್‌ಗೆ (ರೂ.ಗಳಲ್ಲಿ) | ಪ್ರಸ್ತುತ ನಿಗಧಿಪಡಿಸಲಾಗಿರುವ ಪರಿಷ್ಕೃತ ದರ / ಕ್ವಿಂಟಾಲ್‌ಗೆ (ರೂ.ಗಳಲ್ಲಿ) |
|---|---|---|---|
| 25 | ಮೂಲಂಗಿ | 700 | 1400 |
| 26 | ಹೀರೇಕಾಯಿ | 1000 | 2000 |
| 27 | ಪಡವಲಕಾಯಿ | 1000 | 2000 |
| 28 | ತೊಂಡೆಕಾಯಿ | 1200 | 2400 |
| 29 | ಹೂಕೋಸು | 800 | 1600 |
| 30 | ಬೀಟ್‌ರೂಟ್ | 1638 | 3276 |
| 31 | ಈರುಳ್ಳಿ | 1308 | 2616 |
| 32 | ಟಮೋಟೋ | 588 | 1176 |
| 33 | ಆಲೂಗಡ್ಡೆ | 2134 | 4268 |
| 34 | ಕ್ಯಾರೆಟ್ | 2228 | 4456 |
| 35 | ಬೀನ್ಸ್ | 2390 | 4780 |
| 36 | ಅರಿಶಿನ | 4200 | 8400 |
| 37 | ಕರಿಬೂಜ (ಕಲ್ಲಂಗಡಿ) | 1400 | 2800 |
| 38 | ಹಸಿಮೆಣಸಿನಕಾಯಿ | 1954 | 3908 |
| 39 | ದಪ್ಪ ಮೆಣಸಿನಕಾಯಿ | 2000 | 4000 |
| 40 | ಶುಂಠಿ | 3870 | 7740 |
| 41 | ನವಣೆ | 2100 | 4200 |
| 42 | ಎಲೆಕೋಸು | 696 | 1392 |
| 43 | ಕೊತ್ತಂಬರಿ | 3560 | 7120 |
| 44 | ಏಲಕ್ಕಿ | 800/- ಕೆ.ಜಿ.ಗೆ | 1600/- ಕೆ.ಜಿ.ಗೆ |
| 45 | ಮೆಣಸು | 180/- ಕೆ.ಜಿ.ಗೆ | 360/- ಕೆ.ಜಿ.ಗೆ |
| 46 | **ಶಿತ್ತಲೆ** | | |
| | (1) 2 ವರ್ಷಕ್ಕಿಂತ ಕಡಿಮೆ ವಯಸ್ಸಿನ ಗಿಡಗಳಿಗೆ | 200/- ಒಂದು ಗಿಡಕ್ಕೆ | 400/- ಒಂದು ಗಿಡಕ್ಕೆ |
| | (2) 2 ವರ್ಷಕ್ಕಿಂತ ಮೇಲ್ಪಟ್ಟ ವಯಸ್ಸಿನ ಗಿಡಗಳಿಗೆ | 320/- ಒಂದು ಗಿಡಕ್ಕೆ | 640/- ಒಂದು ಗಿಡಕ್ಕೆ |

| ಕ್ರ. ಸಂ. | ಬೆಳೆ | ಸರ್ಕಾರದ ಆದೇಶ ಸಂಖ್ಯೆ:ಅಪಜೀ 130 ಎಫ್‌ಡಬ್ಲ್ಯೂಎಲ್ 2016, ದಿನಾಂಕ:19-09-2016ರಂತೆ ನಿಗಧಿಯಾಗಿರುವ ದರ / ಕ್ವಿಂಟಾಲ್‌ಗೆ (ರೂ.ಗಳಲ್ಲಿ) | ಪ್ರಸ್ತುತ ನಿಗಧಿಪಡಿಸಲಾಗಿರುವ ಪರಿಷ್ಕೃತ ದರ / ಕ್ವಿಂಟಾಲ್‌ಗೆ (ರೂ.ಗಳಲ್ಲಿ) |
|---|---|---|---|
| 47 | ಅಡಿಕೆ /ತೆಂಗು | | |
| | (1) 5 ವರ್ಷಕ್ಕಿಂತ ಕಡಿಮೆ ವಯಸ್ಸಿನ ಗಿಡಗಳಿಗೆ | 400/- ಒಂದು ಮರಕ್ಕೆ | 800/- ಒಂದು ಮರಕ್ಕೆ |
| | (2) ವರ್ಷ 5 ರಿಂದ 9 ವರ್ಷ ವಯಸ್ಸಿನ ಗಿಡಗಳಿಗೆ | 800/- ಒಂದು ಮರಕ್ಕೆ | 1600/- ಒಂದು ಮರಕ್ಕೆ |
| | (3) 10 ವರ್ಷ ಮತ್ತು ಮೇಲ್ಪಟ್ಟ ವಯಸ್ಸಿನ ಗಿಡಗಳಿಗೆ | 2000/- ಒಂದು ಮರಕ್ಕೆ | 4000/- ಒಂದು ಮರಕ್ಕೆ |
| 48 | ಬಾಳೆ | 160/- ಒಂದು ಗಿಡಕ್ಕೆ | 320/- ಒಂದು ಗಿಡಕ್ಕೆ |
| 49 | ಹರಳು | 4604/- ಒಂದು ಕ್ವಿಂಟಾಲ್‌ಗೆ | 9208/- ಒಂದು ಕ್ವಿಂಟಾಲ್‌ಗೆ |
| 50 | ಮೆಂತ್ಯ ಸೊಪ್ಪು | 4/- ಒಂದು ಕಟ್ಟಿಗೆ | 8/- ಒಂದು ಕಟ್ಟಿಗೆ |
| 51 | ನಿಂಬೆ | 10/- ಪ್ರತಿ ಗಿಡಕ್ಕೆ | 20/- ಪ್ರತಿ ಗಿಡಕ್ಕೆ |
| 52 | ಗಜ ನಿಂಬೆ | 24/- ಪ್ರತಿ ಗಿಡಕ್ಕೆ | 48/- ಪ್ರತಿ ಗಿಡಕ್ಕೆ |
| 53 | ಚೆಂಡು ಮಲ್ಲಿಗೆ (ದಪ್ಪದ್ದು) | 200/- ಕೆ.ಜಿ.ಗೆ | 400/- ಕೆ.ಜಿ.ಗೆ |
| 54 | ಕಾಕಡ ಹೂವು | 80/- ಕೆ.ಜಿ.ಗೆ | 160/- ಕೆ.ಜಿ.ಗೆ |
| 55 | ಕನಕಾಂಬರ | 160-240/- ಕೆ.ಜಿ.ಗೆ | 320-480/- ಕೆ.ಜಿ.ಗೆ |
| 56 | ಸೇವಂತಿ | 20-24 ಕೆ.ಜಿ.ಗೆ | 40-48/- ಕೆ.ಜಿ.ಗೆ |
| 57 | ಕಾಫಿ (ಷರಾ:ದರವನ್ನು ಪರಿಷ್ಕರಿಸಲಾಗಿದೆ) | 1 ರಿಂದ 4 ವರ್ಷದ ಅರೇಬಿಕಾ ಒಂದು ಗಿಡಕ್ಕೆ ರೂ.600/- ಹಾಗೂ 4 ವರ್ಷ ಮೇಲ್ಪಟ್ಟ ಅರೇಬಿಕಾ ಒಂದು ಗಿಡಕ್ಕೆ ರೂ.1200/- | |
| | | 1 ರಿಂದ 6 ವರ್ಷದ ರೊಬೋಸ್ಟಾ ಒಂದು ಗಿಡಕ್ಕೆ ರೂ.1500/- ಹಾಗೂ 6 ವರ್ಷ ಮೇಲ್ಪಟ್ಟ ರೊಬೋಸ್ಟಾ ಒಂದು ಗಿಡಕ್ಕೆ ರೂ.3000/- | |
| | **ಹೊಸದಾಗಿ ಸೇರ್ಪಡೆಗೊಳಿಸಲಾದ ಬೆಳೆಗಳು** | | |
| 58 | ಮಾವು | | |
| | (1) 5 ವರ್ಷಕ್ಕಿಂತ ಕಡಿಮೆ ವಯಸ್ಸಿನ ಗಿಡಗಳು | - | ರೂ.750 |
| | (2) 6 ರಿಂದ 10 ವರ್ಷವರೆಗಿನ ಗಿಡಕ್ಕೆ | - | ರೂ.1200 |
| | (3) 10 ವರ್ಷ ಮೇಲ್ಪಟ್ಟ ಗಿಡಕ್ಕೆ | - | ರೂ. 1800 |

Manjula 18/11/23

| ಕ್ರ. ಸಂ. | ಬೆಳೆ | ಸರ್ಕಾರದ ಆದೇಶ ಸಂಖ್ಯೆ:ಅಪಜೀ 130 ಎಫ್‌ಡಬ್ಲ್ಯೂಎಲ್ 2016, ದಿನಾಂಕ:19-09-2016ರಂತೆ ನಿಗಧಿಯಾಗಿರುವ ದರ / ಕ್ವಿಂಟಾಲ್‌ಗೆ (ರೂ.ಗಳಲ್ಲಿ) | ಪ್ರಸ್ತುತ ನಿಗಧಿಪಡಿಸಲಾಗಿರುವ ಪರಿಷ್ಕೃತ ದರ / ಕ್ವಿಂಟಾಲ್‌ಗೆ (ರೂ.ಗಳಲ್ಲಿ) |
|---|---|---|---|
| 59 | ಸಪೋಟ | | |
| | (1) 5 ವರ್ಷಕ್ಕಿಂತ ಕಡಿಮೆ ವಯಸ್ಸಿನ ಗಿಡಗಳು | - | ರೂ. 500 |
| | (2) 5 ವರ್ಷಕ್ಕಿಂತ ಮೇಲ್ಪಟ್ಟ ಗಿಡಕ್ಕೆ | - | ರೂ.800 |
| 60 | ಸೀಬೆ | | |
| | (1) 5 ವರ್ಷಕ್ಕಿಂತ ಕಡಿಮೆ ವಯಸ್ಸಿನ ಗಿಡಗಳು | - | ರೂ.350 |
| | (2) 5 ವರ್ಷಕ್ಕಿಂತ ಮೇಲ್ಪಟ್ಟ ಗಿಡಕ್ಕೆ | - | ರೂ.600 |
| 61 | ಹಲಸು | | |
| | (1) 5 ವರ್ಷಕ್ಕಿಂತ ಕಡಿಮೆ ವಯಸ್ಸಿನ ಗಿಡಗಳು | - | ರೂ.350 |
| | (2) 5 ವರ್ಷಕ್ಕಿಂತ ಮೇಲ್ಪಟ್ಟ ಗಿಡಕ್ಕೆ | - | ರೂ.800 |
| 62 | ದಾಳಿಂಬೆ | - | ರೂ.300/- 1 ಗಿಡಕ್ಕೆ |
| 63 | ಸೀತಾಫಲ 2 ರಿಂದ 4 ವರ್ಷ ಮೇಲ್ಪಟ್ಟು | - | ರೂ.250/- 1 ಗಿಡಕ್ಕೆ |
| 64 | ಹಿಪ್ಪುನೇರಳೆ | - | ರೂ.100/- ಪ್ರತಿ ಗುಂಟೆಗೆ |

18/4/23

(ಜಿ. ಮಂಜುಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ
(ಅರಣ್ಯ-ಎ)

**ಸರ್ಕಾರದ ಆದೇಶ ಸಂಖ್ಯೆ:ಅಪಜೀ 156 ಎಫ್‌ಡಬ್ಲ್ಯೂಎಲ್ 2022, ದಿನಾಂಕ:18-01-2023 ಕ್ಕೆ**
**ಅನುಬಂಧ-2**

**ಬೆಳೆನಾಶಕ್ಕೆ ಪರಿಹಾರ ವಿತರಿಸಲು ಕ್ಷೇತ್ರಾಧಿಕಾರಿಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆ**

| ಕ್ರ. ಸಂ. | ವಿವರಗಳು | ವಿತರಿಸಲಾಗುವ ಪರಿಹಾರ | ಮಂಜೂರಾತಿ ಪ್ರಾಧಿಕಾರ | |
|---|---|---|---|---|
| | | | ಹೆಸರು | ಮೊತ್ತ |
| 1 | ವನ್ಯಪ್ರಾಣಿಗಳಿಂದ ಉಂಟಾಗುವ ಬೆಳೆ ಹಾನಿ | (ಅ)ರೂ.15,000/-ಗಳವರೆಗಿನ ಮೊತ್ತದ ಬೆಳೆ ನಾಶಕ್ಕೆ ಭೂ ಮಾಲೀಕರಿಗೆ ಮಂಜೂರು ಮಾಡುವ ದಯಾತ್ಮಕ ಧನ ಬೆಳೆನಾಶದ ಪೂರ್ಣ ಮೊತ್ತ | ಪ್ರತಿ ವರ್ಷದಲ್ಲಿ ರೂ.2.00 ಲಕ್ಷಗಳ ವರೆಗಿನ ಬೆಳೆನಾಶಕ್ಕೆ ಪರಿಹಾರ ನಿಗದಿಪಡಿಸಿ ಮಂಜೂರು ಮಾಡುವ ಅಧಿಕಾರವನ್ನು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಹಾಗೂ ರೂ.2.00 ಲಕ್ಷಗಳಿಗಿಂತ ಹೆಚ್ಚಿನ ಬೆಳೆನಾಶಕ್ಕೆ ಮೌಲ್ಯಮಾಪನ ಮಾಡಿ ಪರಿಹಾರ ಧನ ನಿಗದಿಪಡಿಸಿ ಪಾವತಿಸಲು ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ / ಅರಣ್ಯ ಸಂರಕ್ಷಣಾಧಿಕಾರಿಗಳಿಗೆ / ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಅಧಿಕಾರ ಪ್ರತ್ಯಾಯೋಜಿಸಿದೆ. | ಪ್ರತಿ ಪ್ರಕರಣಕ್ಕೆ ಗರಿಷ್ಠ ಮೊತ್ತ ರೂ.15,000/-ಗಳು |
| | | (ಆ) ರೂ.15,000/-ಗಳಿಗೆ ಮೇಲ್ಪಟ್ಟು ಹಾಗೂ ರೂ.70,000/-ಗಳವರೆಗಿನ ಮೊತ್ತದ ಬೆಳೆನಾಶಕ್ಕೆ ಶೇಕಡ 50 ರಷ್ಟು ಪರಿಹಾರ ಧನ ಕನಿಷ್ಠ ರೂ.15,000/- ಮತ್ತು ಗರಿಷ್ಠ ರೂ.42,500/- | ಪ್ರತಿ ವರ್ಷದಲ್ಲಿ ರೂ.2.00 ಲಕ್ಷಗಳ ವರೆಗಿನ ಬೆಳೆನಾಶಕ್ಕೆ ಪರಿಹಾರ ನಿಗದಿಪಡಿಸಿ ಮಂಜೂರು ಮಾಡುವ ಅಧಿಕಾರವನ್ನು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಹಾಗೂ ರೂ.2.00 ಲಕ್ಷಗಳಿಗಿಂತ ಹೆಚ್ಚಿನ ಬೆಳೆನಾಶಕ್ಕೆ ಮೌಲ್ಯಮಾಪನ ಮಾಡಿ ಪರಿಹಾರ ಧನ ನಿಗದಿಪಡಿಸಿ ಪಾವತಿಸಲು ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ / | ಪ್ರತಿ ಪ್ರಕರಣಕ್ಕೆ ಗರಿಷ್ಠ ಮೊತ್ತ ರೂ.42,500/-ಗಳು |

| ಕ್ರ. ಸಂ. | ವಿವರಗಳು | ವಿತರಿಸಲಾಗುವ ಪರಿಹಾರ | ಮಂಜೂರಾತಿ ಪ್ರಾಧಿಕಾರ | |
|---|---|---|---|---|
| | | | ಹೆಸರು | ಮೊತ್ತ |
| | | | ಅರಣ್ಯ ಸಂರಕ್ಷಣಾಧಿಕಾರಿಗಳಿಗೆ / ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಅಧಿಕಾರ ಪ್ರತ್ಯಾಯೋಜಿಸಿದೆ. | |
| | | (ಇ) ರೂ. 70,000/-ಗಳಿಗೆ ಮೇಲ್ಪಟ್ಟ ಬೆಳೆನಾಶಕ್ಕೆ ಶೇಕಡ 30 ರಷ್ಟು ಪರಿಹಾರ ಧನ ಕನಿಷ್ಠ ರೂ.42,500/- ಮತ್ತು ಗರಿಷ್ಠ ರೂ.2,00,000/- | ಕ್ಷೇತ್ರ ವ್ಯಾಪ್ತಿಯ ಅರಣ್ಯ ಸಂರಕ್ಷಣಾಧಿಕಾರಿ / ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ | ಪ್ರತಿ ಪ್ರಕರಣಕ್ಕೆ ಗರಿಷ್ಠ ಮೊತ್ತ ರೂ.42,500/- ಮತ್ತು ಗರಿಷ್ಠ ಮೊತ್ತ ರೂ.2,00,000/-ಗಳು |

Manjula 18/4/23

(ಜಿ. ಮಂಜುಳ)

ಸರ್ಕಾರದ ಅಧೀನ ಕಾರ್ಯದರ್ಶಿ

ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ

(ಅರಣ್ಯ-ಎ)

ಅನುಬಂಧ-2

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :-** ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗುವ ಸಾಕುಪ್ರಾಣಿಗಳ ಪ್ರಾಣಹಾನಿ ಪ್ರಕರಣಗಳಿಗೆ ನೀಡಲಾಗುತ್ತಿರುವ ಪರಿಹಾರ ಧನವನ್ನು ನಿಗಧಿಪಡಿಸುವ ಬಗ್ಗೆ.

**ಓದಲಾಗಿದೆ :-**
1. ಸರ್ಕಾರದ ಆದೇಶ ಸಂಖ್ಯೆ:ಅಪಜೀ 109 ಎಫ್‌ಎಪಿ 2014, ದಿನಾಂಕ:13/08/2014.
2. ರಾಷ್ಟ್ರೀಯ / ರಾಜ್ಯ ವಿಪತ್ತು ನಿರ್ವಹಣಾ ನಿಧಿ ಇವರ ಪತ್ರ ಸಂಖ್ಯೆ: 32-7/2014-ಎನ್‌ಡಿಎಮ್-I, ದಿನಾಂಕ:08-04-2015
3. ಸರ್ಕಾರದ ಆದೇಶ ಸಂಖ್ಯೆ:ಅಪಜೀ 144 ಎಫ್‌ಎಪಿ 2020, ದಿನಾಂಕ:20/04/2021.
4. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಬೆಂಗಳೂರು ಇವರ ಪತ್ರ ಸಂಖ್ಯೆ:ಪ್ರಮುಅಸಂ(ವಜೀ)/ಸಿ2/ಸಿಆರ್-37/2011-12, ದಿನಾಂಕ:10-11-2022.

*****

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಸರ್ಕಾರದ ಆದೇಶದಲ್ಲಿ 2014-15ನೇ ಸಾಲಿನಿಂದ ಜಾರಿಗೆ ಬರುವಂತೆ ಮಾನವ-ವನ್ಯಜೀವಿ ಸಂಘರ್ಷದಿಂದಾಗಿ ಹಸು, ಎತ್ತು, ಎಮ್ಮೆ, ಕೋಣಗಳು ಮೃತಪಟ್ಟಲ್ಲಿ ಅವುಗಳ ಮಾಲೀಕರಿಗೆ ನೀಡಲಾಗುತ್ತಿದ್ದ ಪರಿಹಾರ ಧನವನ್ನು ರೂ.10,000/- ಗಳಿಗೆ ಹೆಚ್ಚಿಸಿ ಹಾಗೂ ಮೇಕೆ, ಕುರಿಗಳು ಮೃತಪಟ್ಟಲ್ಲಿ ಅವುಗಳ ಮಾಲೀಕರಿಗೆ ನೀಡಲಾಗುತ್ತಿರುವ ಪರಿಹಾರ ಧನವನ್ನು ರೂ.5,000/- ಗಳಿಗೆ ಹೆಚ್ಚಿಸಿ ಹಾಗೂ ಬೆಳೆಹಾನಿ ಉಂಟಾದಲ್ಲಿ ಸಂತ್ರಸ್ತ ರೈತರಿಗೆ ನೀಡಲಾಗುತ್ತಿದ್ದ ಪರಿಹಾರ ಧನದ ಗರಿಷ್ಠ ಮಿತಿಯನ್ನು ರೂ.50,000/- ರಿಂದ ರೂ.1,00,000/- ಗಳಿಗೆ ಹೆಚ್ಚಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರ ರಾಷ್ಟ್ರೀಯ ವಿಪತ್ತು ನಿರ್ವಹಣಾ ನಿಧಿ (NDRF) / ರಾಜ್ಯ ವಿಪತ್ತು ನಿರ್ವಹಣಾ ನಿಧಿ (SDRF) ಯಿಂದ ಹೊರಡಿಸಲಾಗಿರುವ ಪರಿಷ್ಕೃತ ಪಟ್ಟಿ / ಮಾನದಂಡಗಳ ಪ್ರಕಾರ "**ಸಣ್ಣ ಮತ್ತು ಅತಿಸಣ್ಣ ರೈತರಿಗೆ ಪಶು ಪಾಲನೆ ನೆರವಿನಡಿಯಲ್ಲಿ**" ರಾಜ್ಯ ಸರ್ಕಾರವು ಗೊತ್ತುಪಡಿಸಿರುವ ಸಕ್ಷಮ ಪ್ರಾಧಿಕಾರದಿಂದ ಪ್ರಮಾಣೀಕರಿಸುವ ಪರತ್ತಿನೊಂದಿಗೆ ಪರಿಹಾರ ಮೊತ್ತವನ್ನು ನೀಡುವಂತೆ ಸೂಚಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರ ಸರ್ಕಾರದ ಆದೇಶದಲ್ಲಿ ಸಾಕುಪ್ರಾಣಿಗಳಾದ ಹಸು, ಎತ್ತು, ಎಮ್ಮೆ, ಕೋಣಗಳು, ವನ್ಯಪ್ರಾಣಿಗಳ ದಾಳಿಯಿಂದ ಮೃತಪಟ್ಟಲ್ಲಿ, ಅವುಗಳ ಮಾಲೀಕರಿಗೆ ನೀಡಲಾಗುತ್ತಿದ್ದ ಪರಿಹಾರ ಧನವನ್ನು State Disaster Response Fund (SDRF) ನಲ್ಲಿನ ದರಗಳಂತೆ 2021-22ನೇ ಸಾಲಿನಿಂದ ಜಾರಿಗೆ ಬರುವಂತೆ ಪಾವತಿಸಲು ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯ ಭವನ, ಬೆಂಗಳೂರು, ಇವರು ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಸಾಕುಪ್ರಾಣಿಗಳಾದ ಹಸು, ಎತ್ತು, ಎಮ್ಮೆ, ಕೋಣ ಹಾಗೂ ಕುರಿ ಮತ್ತು ಮೇಕೆಗಳ ಪ್ರಾಣಹಾನಿ ಪ್ರಕರಣಗಳಿಗೆ ಹೊರತುಪಡಿಸಿ, ಉಳಿದ ಸಾಕುಪ್ರಾಣಿಗಳಾದ ಕೋಳಿ, ಕುದುರೆ, ಕತ್ತೆ ಮುಂತಾದವುಗಳು ವನ್ಯಪ್ರಾಣಿ ದಾಳಿಯಿಂದ ಮೃತಪಟ್ಟಲ್ಲಿ, ರಾಷ್ಟ್ರೀಯ / ರಾಜ್ಯ ವಿಪತ್ತು ನಿರ್ವಹಣಾ ನಿಧಿ ಇವರ ಪತ್ರ ಸಂಖ್ಯೆ:32-7/2014-ಎನ್‌ಡಿಎಮ್ -1, ದಿನಾಂಕ:08-04-2015 ರ ರಾಜ್ಯ ವಿಪತ್ತು ನಿರ್ವಹಣಾ ನಿಧಿ (State



Manjulag 16/1/23

Disaster Response Fund) ರಲ್ಲಿನ ದರಗಳಂತೆ ಪರಿಹಾರ ಪಾವತಿಸಲು ಕ್ರಮಕೈಗೊಳ್ಳಲು ಅನುಕೂಲವಾಗುವಂತೆ ಹಾಗೂ ಪರಿಹಾರ ಪಾವತಿಸುವ ಆರ್ಥಿಕ ವಿತ್ತಾಧಿಕಾರವನ್ನು ಕ್ಷೇತ್ರಮಟ್ಟದ ಉಪ ಅರಣ್ಯ ಸಂರಕ್ಷಣಾಧಿಕಾರಿ / ಅರಣ್ಯ ಸಂರಕ್ಷಣಾಧಿಕಾರಿ / ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಆರ್ಥಿಕ ಅಧಿಕಾರಗಳನ್ನು ಪ್ರತ್ಯಾಯೋಜಿಸಿ ಮಂಜೂರಾತಿ ನೀಡುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಇ- ಸಂಖ್ಯೆ: ಅಪಜೀ 171 ಎಫ್‌ಡಬ್ಲ್ಯೂಎಲ್ 2022.**
**ಬೆಂಗಳೂರು, ದಿನಾಂಕ:16-02-2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಸಾಕುಪ್ರಾಣಿಗಳ ಪ್ರಾಣಹಾನಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ:ಅಪಜೀ 144 ಎಫ್‌ಎಪಿ 2020, ದಿನಾಂಕ:20-04-2021ರಲ್ಲಿನ ಸಾಕುಪ್ರಾಣಿಗಳಾದ ಹಸು, ಎತ್ತು, ಎಮ್ಮೆ & ಕೋಣಗಳ ಜೊತೆಗೆ ಪ್ರಸ್ತುತ ಕೋಳಿ, ಕುದುರೆ, ಕತ್ತೆ ಮುಂತಾದ ಸಾಕುಪ್ರಾಣಿಗಳ ಪ್ರಾಣಹಾನಿ ಪ್ರಕರಣಗಳಿಗೆ ಪರಿಹಾರ ಧನವನ್ನು ರಾಜ್ಯ ವಿಪತ್ತು ನಿರ್ವಹಣಾ ನಿಧಿ (State Disaster Response Fund) ರಲ್ಲಿನ ಚಾಲ್ತಿಯಲ್ಲಿರುವ ಪರಿಷ್ಕೃತ ದರಗಳಂತೆ ಪಾವತಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ.

ಈ ಪರಿಹಾರ ಮೊತ್ತದ ಪಾವತಿಗೆ ಸಂಬಂಧಿಸಿದಂತೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಹೊರಡಿಸಲಾಗಿದೆ:-

(1) ವನ್ಯಪ್ರಾಣಿಯಿಂದ ಉಂಟಾಗುವ ಸಾಕುಪ್ರಾಣಿಗಳ ಪ್ರಾಣಹಾನಿ ಪ್ರಕರಣಗಳಿಗೆ ಅನುದಾನ ಲಭ್ಯತೆಯನ್ನಾಧರಿಸಿ ಪರಿಹಾರ ಧನವನ್ನು ವಿತರಿಸುವುದು.

(2) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಇವರು ಎಲ್ಲಾ ಪ್ರಕರಣಗಳಲ್ಲಿ ಪರಿಹಾರ ಧನದ ವಿತರಣೆಯ ಆಡಳಿತವನ್ನು ನಿಭಾಯಿಸುವುದು.

(3) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು, ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು, ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು, ಅರಣ್ಯ ಸಂರಕ್ಷಣಾಧಿಕಾರಿಗಳು, ಪರಿಹಾರ ಮೊತ್ತವು ಗರಿಷ್ಠವಾಗಿರುವ ಪ್ರಕರಣಗಳಲ್ಲಿ ಪರಿಹಾರ ಧನ ವಿತರಿಸುವ ಸಂದರ್ಭದಲ್ಲಿ ಸಂಬಂಧಿಸಿದ ಕ್ಷೇತ್ರ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಂದ / ಅರಣ್ಯ ಸಂರಕ್ಷಣಾಧಿಕಾರಿಗಳಿಂದ ಸ್ಥಳ ತಪಾಸಣೆ ಮಾಡಿಸುವುದು.

(4) ವನ್ಯಪ್ರಾಣಿಗಳಿಂದ ಸಾಕುಪ್ರಾಣಿಗಳಿಗೆ ಉಂಟಾಗುವ ಪ್ರಾಣಹಾನಿ ಪ್ರಕರಣಗಳಲ್ಲಿ ನಿಷೇಧಿಸಲ್ಪಟ್ಟ ಮೇವು ಪ್ರದೇಶಗಳನ್ನು ಹೊರತುಪಡಿಸಿ ಉಳಿದ ಪ್ರದೇಶಗಳಲ್ಲಿ ವನ್ಯಜೀವಿಗಳಿಂದ ಹತ್ಯೆಯಾದ ಸಾಕು ಪ್ರಾಣಿಗಳ ವಾರಸುದಾರರಿಗೆ ಪರಿಹಾರ ಧನವನ್ನು ಮಂಜೂರು ಮಾಡಲು ಕ್ಷೇತ್ರ ವ್ಯಾಪ್ತಿಯ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು/ ಅರಣ್ಯ ಸಂರಕ್ಷಣಾಧಿಕಾರಿಗಳು/ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಆರ್ಥಿಕ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ.

Manjula 16/2/23

ಈ ಪರಿಹಾರ ಮೊತ್ತ ಪಾವತಿಯು ಈ ಆದೇಶ ಹೊರಡಿಸಿದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 751 ವೆಚ್ಚ-5/2022, ಆಇ 696 ವೆಚ್ಚ-5/2022, ದಿನಾಂಕ:12/01/2023ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Manjula 16/2/23
(ಜಿ. ಮಂಜುಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ
(ಅರಣ್ಯ-ಎ)
16/2/23

ಇವರಿಗೆ,

1. ಪ್ರಧಾನ ಮಹಾಲೇಖಪಾಲರು, (ಲೆಕ್ಕಪತ್ರ / ಲೆಕ್ಕಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು), ಅರಣ್ಯಭವನ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು 560003.
3. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯಭವನ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು 560003.
4. ಎಲ್ಲಾ ಅಪರ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು / ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು / ಅರಣ್ಯ ಸಂರಕ್ಷಣಾಧಿಕಾರಿಗಳು / ಉಪ ಅರಣ್ಯ ಸಂರಕ್ಷಣಾಧಿಕಾರಿಗಳು (ಪ್ರಾದೇಶಿಕ / ವನ್ಯಜೀವಿ) / ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು (ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಬೆಂಗಳೂರು ಇವರ ಮುಖಾಂತರ)
5. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ.
8. ಸರ್ಕಾರದ ಜಂಟಿ ಕಾರ್ಯದರ್ಶಿ, ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-5), ವಿಧಾನಸೌಧ, ಬೆಂಗಳೂರು.
10. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿಗಳು.

ಕನ್ನಡ ಕಡ್ಡಾಯ

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ವನ್ಯಪ್ರಾಣಿಗಳ ದಾಳಿಯಿಂದ ಗಾಯಗೊಂಡ ಸಂತ್ರಸ್ಥರಿಗೆ ವೈದ್ಯಕೀಯ ವೆಚ್ಚ ಭರಿಸುವ ಕುರಿತು.

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯವರ ಕಛೇರಿ (ವನ್ಯಜೀವಿ) ಬೆಂಗಳೂರು.
16 SEP 2015
ಸಂಖ್ಯೆ:

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ: ಅಪಜೀ 143 ಎಫ್‌ಡಬ್ಲ್ಯೂಎಲ್ 2010 ಬೆಂಗಳೂರು, ದಿನಾಂಕ: 30-04-2011.

2. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ(ವನ್ಯಜೀವಿ), ಬೆಂಗಳೂರು ಇವರ ಪತ್ರ ಸಂಖ್ಯೆ: ಸಿ2/ಡಬ್ಲ್ಯೂಎಲ್/ಸಿಆರ್-37/2011-12, ದಿನಾಂಕ: 30-03-2013.

---

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ದಿನಾಂಕ: 30-04-2011ರ ಸರ್ಕಾರಿ ಆದೇಶದಲ್ಲಿ ಕಾಡು ಪ್ರಾಣಿಗಳಿಂದ ಗಾಯಗೊಂಡ ಪ್ರತಿ ವ್ಯಕ್ತಿಗೆ ಗರಿಷ್ಠ ಮೊತ್ತ ರೂ.20,000/-ಗಳ ದಯಾತ್ಮಕ ಧನ ಮಂಜೂರು ಮಾಡಲು ಅರಣ್ಯ ಇಲಾಖೆಯ ಕ್ಷೇತ್ರ ವ್ಯಾಪ್ತಿಯ ಅಧಿಕಾರಿಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸಿ ಮಂಜೂರಾತಿ ಆದೇಶ ನೀಡಲಾಗಿದೆ.

2. ಮೇಲೆ(2)ರಲ್ಲಿ ಓದಲಾದ ದಿನಾಂಕ: 30-03-2013ರ ಪತ್ರದಲ್ಲಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಬೆಂಗಳೂರು ಇವರು ಸರ್ಕಾರದ ದಿನಾಂಕ: 30-04-2011ರ ಆದೇಶದಲ್ಲಿ ಕಾಡು ಪ್ರಾಣಿಗಳ ದಾಳಿಯಿಂದ ಶಾಶ್ವತ ಅಂಗವಿಕಲತೆಗೊಂಡ ಪ್ರಕರಣಗಳಲ್ಲಿ ಸಂತ್ರಸ್ಥರಿಗೆ ದಯಾತ್ಮಕ ಧನದೊಂದಿಗೆ ಚಿಕಿತ್ಸೆಗಾಗಿ ಮಾಡಿದ ವೆಚ್ಚವನ್ನು ಸಹ ಭರಿಸಲು ಅವಕಾಶ ಕಲ್ಪಿಸಿರುವುದನ್ನು ಉಲ್ಲೇಖಿಸಿ, ಆದರೆ ಸದರಿ ಆದೇಶದಲ್ಲಿ ಕಾಡು ಪ್ರಾಣಿಗಳ ದಾಳಿಯಿಂದ ಗಾಯಗೊಂಡ ವ್ಯಕ್ತಿಗಳಿಗೆ ವೈದ್ಯಕೀಯ ವೆಚ್ಚ ಭರಿಸುವ ಅವಕಾಶ ಕಲ್ಪಿಸಿರುವುದಿಲ್ಲ ಎಂಬ ಅಂಶದ ಕಡೆಗೆ ಗಮನ ಸೆಳೆದು, ಕಾಡು ಪ್ರಾಣಿಗಳ ದಾಳಿಯಿಂದ ಗಾಯಗೊಂಡ ಸಂತ್ರಸ್ಥರಿಗೆ ಈಗ ನೀಡಲಾಗುತ್ತಿರುವ ದಯಾತ್ಮಕಧನದೊಂದಿಗೆ ಗಾಯದಿಂದ ಚಿಕಿತ್ಸೆ ಪಡೆಯಲು ವೆಚ್ಚ ಮಾಡಿದ ಹಣವನ್ನು ಸಹ ಪಾವತಿಸುವ ಕುರಿತು ಸೂಕ್ತ ಆದೇಶ ಹೊರಡಿಸಲು ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಆದ್ದರಿಂದ ಈ ಕೆಳಗಿನಂತೆ ಆದೇಶ ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಅಪಜೀ 128 ಎಫ್‌ಡಬ್ಲ್ಯೂಎಲ್ 2013**
**ಬೆಂಗಳೂರು, ದಿನಾಂಕ: 15.09.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಕಾಡುಪ್ರಾಣಿಗಳ ದಾಳಿಯಿಂದ ಶಾಶ್ವತ ಅಂಗವಿಕಲತೆಗೆ ಒಳಗಾದ ಸಂತ್ರಸ್ಥರಿಗೆ ದಯಾತ್ಮಕಧನದ ಜೊತೆಗೆ ವೈದ್ಯಕೀಯ ವೆಚ್ಚವನ್ನು ಸಹ ನೀಡುತ್ತಿರುವುದರಿಂದ, ಕಾಡು ಪ್ರಾಣಿಗಳ ದಾಳಿಯಿಂದ ಗಾಯಗೊಂಡ ಇತರೆ ಪ್ರಕರಣಗಳಲ್ಲಿಯೂ ಸಹ ಸಂತ್ರಸ್ಥರಿಗೆ ದಯಾತ್ಮಕಧನದ ಜೊತೆಗೆ ವೈದ್ಯಕೀಯ ವೆಚ್ಚವನ್ನು ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರು ಮಾಡಲು ಆದೇಶಿಸಲಾಗಿದೆ.

1. ವೈದ್ಯಕೀಯ ವೆಚ್ಚದ ದರಗಳನ್ನು ಸರ್ಕಾರಿ ನೌಕರರಿಗೆ ಅನ್ವಯಿಸುವ ಸಿಜಿಹೆಚ್‌ಎಸ್ ದರಗಳಿಗೆ ಮಿತಿಗೊಳಿಸತಕ್ಕದ್ದು.
2. ಈ ಸೌಲಭ್ಯವು ಈ ಆದೇಶ ಹೊರಡಿಸಿದ ದಿನಾಂಕದಿಂದ ಜಾರಿಗೆ ಬರುವುದು.
3. ಪ್ರಸ್ತುತ ಲೆಕ್ಕ ಶೀರ್ಷಿಕೆಯಡಿ ಒದಗಿಸಿರುವ ಅನುದಾನದಲ್ಲಿಯೇ ಹೆಚ್ಚುವರಿ ವೆಚ್ಚವನ್ನು ಭರಿಸತಕ್ಕದ್ದು.

2. [illegible] 5/2013, [illegible]

[illegible]

[illegible]

1. [illegible]
2. [illegible] -560 001.
3. [illegible] -560 001.
4. [illegible]
5. [illegible]
6. [illegible]
7. [illegible]